RNU AIR DHARWAD

JULY 23, 2025

# AKASHAVANI - DHARWAD
# PRADESH SAMACHARA (KANNADA) 12 PM

**ರಾಜ್ಯದಲ್ಲಿ ಮಾನವ ಸಂಪನ್ಮೂಲ ಅಭಿವೃದ್ಧಿ** ಹಾಗೂ ಸುಸ್ಥಿರ ಜಿಲ್ಲಾ ಅಭಿವೃದ್ಧಿ ಯೋಜನೆ ರೂಪಿಸಲು, 'ದೂರದೃಷ್ಟಿ ಯೋಜನೆ–2031', ಕ್ಕೆ ಅನುಗುಣವಾಗಿ, ವಿವಿಧ ಹಂತಗಳಲ್ಲಿ ಮಾಹಿತಿ ಸಂಗ್ರಹ ಹಾಗೂ ವಿಶ್ಲೇಷಣೆ ಪ್ರಕ್ರಿಯೆ ಪೂರ್ಣಗೊಳಿಸಿ, ಡಿಸೆಂಬರ್ 15 ರೊಳಗೆ ಯೋಜನಾ ಆಯೋಗದಿಂದ, ಸರ್ಕಾರಕ್ಕೆ ವರದಿ ಸಲ್ಲಿಸಲಾಗುವುದು ಎಂದು ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷ ಬಿ.ಆರ್.ಪಾಟೀಲ ತಿಳಿಸಿದ್ದಾರೆ. ಕಲಬುರಗಿಯಲ್ಲಿ ಜರುಗಿದ ಕಲ್ಯಾಣ ಕರ್ನಾಟಕ ಭಾಗದ 7 ಜಿಲ್ಲೆಗಳ, ಪ್ರಗತಿ ಪರಿಶೀಲನಾ ಸಭೆ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ವರದಿ ಸಿದ್ಧಪಡಿಸಲು ಇಲಾಖಾವಾರು ಮಾಹಿತಿ ಸಂಗ್ರಹ ಅಗತ್ಯವಾಗಿದೆ ಎಂದರು.

<><><>

**ಕೇಂದ್ರ ಸರ್ಕಾರದ ಸಾಮಾಜಿಕ ಭದ್ರತಾ ಯೋಜನೆಗಳಾದ,** ಪ್ರಧಾನಮಂತ್ರಿ ಜೀವನ ಜ್ಯೋತಿ, ಜೀವನ ಬಿಮಾ, ಜೀವನ ಸುರಕ್ಷಾ ಹಾಗೂ ಅಟಲ್ ಪಿಂಚಣಿ ಯೋಜನೆಗಳ ಕುರಿತು ತಿಳಿವಳಿಕೆ ಮೂಡಿಸುವ ಅಭಿಯಾನಕ್ಕೆ ಕೊಪ್ಪಳ ಜಿಲ್ಲೆ, ಕುಣಿಕೇರಿ ಗ್ರಾಮದಲ್ಲಿ ಚಾಲನೆ ನೀಡಲಾಯಿತು. ಭಾರತೀಯ ಸ್ಟೇಟ್ ಬ್ಯಾಂಕ್ ಹಾಗೂ ಕರ್ನಾಟಕ ಗ್ರಾಮೀಣ ಬ್ಯಾಂಕ್ ಸಹಯೋಗದಲ್ಲಿ ಜರುಗಿದ ಅಭಿಯಾನದಲ್ಲಿ ಪಾಲ್ಗೊಂಡ, ಬಿಮಾ ಯೋಜನೆ ಫಲಾನುಭವಿ, ಕುಣಿಕೇರಿ ಗ್ರಾಮದ ನಿರ್ಮಲಾ ಅವರು ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ಹಂಚಿಕೊಂಡಿದ್ದಾರೆ.

<><><>

**ರಾಜ್ಯದಲ್ಲಿ ಸುಳ್ಳು ದಾಖಲೆ** ಸಲ್ಲಿಸಿ, ಸಾಮಾಜಿಕ ಭದ್ರತಾ ಯೋಜನೆಗಳ ಲಾಭ ಪಡೆಯುತ್ತಿರುವ 11 ಲಕ್ಷ 80 ಸಾವಿರ ಅನುಮಾನಾಸ್ಪದ ಪ್ರಕರಣಗಳು ಕಂಡು ಬಂದಿದ್ದು, ಇವುಗಳ ನೈಜ್ಯತೆ ಪರಿಶೀಲಿಸಲಾಗುವುದು ಎಂದು ಕಂದಾಯ ಖಾತೆ ಸಚಿವ ಕೃಷ್ಣಬೈರೇಗೌಡ ತಿಳಿಸಿದ್ದಾರೆ. ಉತ್ತರ ಕನ್ನಡ ಜಿಲ್ಲೆ ಕಾರವಾರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜರುಗಿದ ಇಲಾಖೆ ಪ್ರಗತಿ ಪರಿಶೀಲನಾ ಸಭೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ರಾಜ್ಯದಲ್ಲಿ ಪೌತಿ ಆಂದೋಲನವನ್ನು ಆನ್ ಲೈನ್ ಮೂಲಕ ಆರಂಭಿಸಲಾಗಿದೆ ಎಂದರು.

<><><>

**ಇಂದು ದೇಶದ ಮಹಾನ್ ಸ್ವಾತಂತ್ರ್ಯ ಹೋರಾಟಗಾರರಾದ,** ಲೋಕಮಾನ್ಯ ಬಾಲಗಂಗಾಧರ ತಿಲಕ ಹಾಗೂ ಕ್ರಾಂತಿಕಾರಿ ಚಂದ್ರಶೇಖರ ಅಜಾದರ ಜನ್ಮ ವಾರ್ಷಿಕ ದಿನ. ಸ್ವರಾಜ್ಯ ನನ್ನ ಜನ್ಮಸಿದ್ಧ ಹಕ್ಕು ಎಂದು ಘೋಷಣೆ ಮೊಳಗಿಸಿದ್ದ, ಬಾಲಗಂಗಾಧರ ತಿಲಕರ ಸಾಮಾಜಿಕ ಕೊಡುಗೆಗಳನ್ನು ಸ್ಮರಿಸಿರುವ, ಕೇಂದ್ರ ನವ ಮತ್ತು ನವೀಕರಿಸಬಹುದಾದ ಇಂಧನ ಖಾತೆ ಸಚಿವರಾದ ಪ್ರಲ್ಹಾದ್ ಜೋಶಿ ಅವರು, ಮಹಾತ್ಮರ ರಾಷ್ಟ್ರೀಯತೆಯ ಮೌಲ್ಯಗಳು ಸಮಾಜಕ್ಕೆ ಆದರ್ಶಪ್ರಾಯ ಎಂದಿದ್ದಾರೆ. ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ ಸೇರಿದಂತೆ ಗಣ್ಯರು ಸ್ವಾತಂತ್ರ್ಯ ಹೋರಾಟಗಾರರ ತ್ಯಾಗ ಹಾಗೂ ಬಲಿದಾನವನ್ನು ಸ್ಮರಿಸಿದ್ದಾರೆ.

<><><>

**ರಾಜ್ಯದ ವಿವಿಧ ಜಿಲ್ಲೆಗಳಲ್ಲಿ** ಕಳೆದ ಎರಡು ವರ್ಷಗಳಿಂದ ಜನತಾ ದರ್ಶನ ಸಭೆ ನಡೆಸಲಾಗುತ್ತಿದ್ದು, ಸಾರ್ವಜನಿಕರ ಸಮಸ್ಯೆ ಆಲಿಸಿ, ಅಹವಾಲು ಸ್ವೀಕರಿಸಿ ಪರಿಹರಿಸಲು, ಸಹಕಾರಿಯಾಗಿದೆ ಎಂದು ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ್ ಲಾಡ್ ಹೇಳಿದರು. ಧಾರವಾಡ ಅಣ್ಣಿಗೇರಿ ಪಟ್ಟಣದ, ಆದಿ ಕವಿ ಪಂಪ ಸ್ಮಾರಕ ಭವನದಲ್ಲಿ ಜರುಗಿದ ತಾಲೂಕು ಮಟ್ಟದ ಜನತಾ ದರ್ಶನ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಕಾರ್ಯಕ್ರಮದಲ್ಲಿ ಒಟ್ಟು 181 ಅರ್ಜಿಗಳು ಸಲ್ಲಿಕೆಯಾಗಿವೆ, ಆಯಾ ಇಲಾಖೆ ಅಧಿಕಾರಿಗಳಿಗೆ ಕಳುಹಿಸಲಾಗಿದ್ದು, ಪರಿಹಾರ ನೀಡಲಾಗುವುದು ಎಂದರು.

<><><>

**ಆರೋಗ್ಯ ಇಲಾಖೆಯ ಯಶಸ್ವಿ ಕಾರ್ಯಕ್ರಮಗಳಲ್ಲಿ** ಒಂದಗಿರುವ ಪುನೀತ್ ರಾಜಕುಮಾರ್ ಹೃದಯ ಜ್ಯೋತಿ ಯೋಜನೆಯನ್ನು ರಾಜ್ಯದ ಎಲ್ಲ ತಾಲೂಕು ಆಸ್ಪತ್ರೆಗಳಿಗೆ ವಿಸ್ತರಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಖಾತೆ ಸಚಿವ ದಿನೇಶ ಗುಂಡೂರಾವ್ ಹೇಳಿದ್ದಾರೆ. ಧಾರವಾಡ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಬೆಳಗಾವಿ ವಿಭಾಗ ಮಟ್ಟದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. 10 ಹಾಸಿಗೆಗಳ ರಾಜ್ಯದ ಒಂಬತ್ತು ತಾಲೂಕು ಆಸ್ಪತ್ರೆಗಳನ್ನು, 30 ಹಾಸಿಗೆ ಆಸ್ಪತ್ರೆಗಳಾಗಿ ಮೇಲ್ದರ್ಜೆಗೇರಿಸಲಾಗುವುದು, ಇದರಲ್ಲಿ ಅಳ್ನಾವರ ಹಾಗೂ ಅಣ್ಣಿಗೇರಿ ಆಸ್ಪತ್ರೆಗಳು ಸೇರಿವೆ ಎಂದರು.

<><><>

**ಗದಗ ಜಿಲ್ಲೆ ಸೊರಟೂರು ಗ್ರಾಮದಲ್ಲಿ** 61 ಲಕ್ಷ ರೂಪಾಯಿ ವೆಚ್ಚದ ಆರೋಗ್ಯ ಕ್ಷೇಮ ಕೇಂದ್ರ ಹಾಗೂ 3 ಕೋಟಿ ರೂಪಾಯಿ ಮೊತ್ತದ, ಯಲಿಶಿರುಂದ–ವೆಂಕಟಾಪುರ–ಸೊರಟೂರ ರಸ್ತೆ ನಿರ್ಮಾಣ ಕಾಮಗಾರಿಗಳಿಗೆ ಜಿಲ್ಲಾ ಉಸ್ತುವಾರಿ ಖಾತೆ ಸಚಿವ ಎಚ್.ಕೆ ಪಾಟೀಲ್ ಇನಾಂ ವೆಂಕಟಾಪುರದಲ್ಲಿ ಚಾಲನೆ ನೀಡಿದರು.

<><><>

**ಕೊಪ್ಪಳ ನಗರದ ಕನ್ನಡ ಸಾಹಿತ್ಯ** ಭವನದಲ್ಲಿ, ಜಿಲ್ಲಾಡಳಿತ ಹಾಗೂ ಕೊಪ್ಪಳ ನಗರಸಭೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಂಯುಕ್ತಾಶ್ರಯದಲ್ಲಿ, ಶಿವಶರಣ ಹಡಪದ ಅಪ್ಪಣ್ಣ ಜಯಂತಿ ಕಾರ್ಯಕ್ರಮ ಜರುಗಿತು.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**